ಸಿ–೦೦ ಪಿ.ಎಂ.]

೧೯೮೬ರ ಕರ್ನಾಟಕ ವೃತ್ತಿಗಳು, ವ್ಯವಹಾರಗಳು ಮತ್ತು ಕಸಬುಗಳು ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ೧೯೮೬ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು ಮತ್ತು ಕಸಬುಗಳ ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ

''೧೯೮೬ರ ಕರ್ನಾಟಕ ವೃತ್ತಿಗಳು ವ್ಯವಹಾರಗಳು ಮತ್ತು ಕಸಬುಗಳು ಮತ್ತು ಉದ್ಯೋಗಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ರ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಂಬುಗಳು, ಮತ್ತು ಉದ್ಯೋಗಗಳ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

*** ಅಧ್ಯಕ್ಷರು.**—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೬ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ರ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ

''೧೯೮೬ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ)ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ(೪) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

---

* Annexure.

ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—

ಮಾನ್ಯ ಅಧ್ಯಕ್ಷರೆ, ೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೪) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಸಂಖ್ಯೆ (೪) ಧನವಿನಿಯೋಗ ವಿಧೇಯಕದ ಮೇಲೆ ಈಗಾಗಲೇ ದೀರ್ಘವಾದಂತಹ ಚರ್ಚೆ ಆಗಿದೆ. ಅದಕ್ಕೆ ದೀರ್ಘವಾದಂತಹ ಉತ್ತರವನ್ನೂ ಕೂಡ ಮಾನ್ಯ ಮುಖ್ಯಮಂತ್ರಿಗಳವರು ಕೊಟ್ಟಿದ್ದಾರೆ. ಎಲ್ಲಾ ವಿಷಯಗಳ ಮೇಲೆಯೂ ಕೂಡ ಸನ್ಮಾನ್ಯ ವಿರೋಧಪಕ್ಷದ ನಾಯಕರು ಮತ್ತು ಇತರ ವಿರೋಧ ಪಕ್ಷದ ಸದಸ್ಯರು ಸಾಕಷ್ಟು ಬೆಳಕನ್ನು ಚೆಲ್ಲಿದ್ದಾರೆ. ಸರಕಾರದಿಂದ ಸೂಕ್ತವಾದಂತಹ ಉತ್ತರವನ್ನು ಕೂಡ ಪಡೆದಿದ್ದಾರೆ. ನಾನು ಅಪರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ ಈ ಸಂಖ್ಯೆ (೪) ವಿಧೇಯಕಕ್ಕೆ ದಯವಿಟ್ಟು ತಮ್ಮ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೪) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು.—''ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವನೆಯನ್ನು ಅಂಗೀಕರಿಸಲಾಯಿತು.

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ೧೯೮೬ರ ಧನವಿನಿಯೋಗ ಸಂಖ್ಯೆ (೪) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇ

ಅಧ್ಯಕ್ಷರು —ಪ್ರಸ್ತಾವ ಏನೆಂದರೆ ೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೪) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ಮುಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೬ರ ಕರ್ನಾಟಕ ಧನ ವಿನಿಯೋಗ ವಿಧೇಯಕ

ಪರ್ಯಾಲೋಚನ ಪ್ರಸ್ತಾವ